ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ನೂತನ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

ಸಂಖ್ಯೆ:ಸಿ1(2)ಇತರೆ.ಶಿ/ಅ.ಮೀಸಲಾತಿ(371–ಜೆ)62/2013–14 ದಿನಾಂಕ: 19–6–2019

## ಸುತ್ತೋಲೆ

**ವಿಷಯ:–** ಕರ್ನಾಟಕ ಸಾರ್ವಜನಿಕ ಉದ್ಯೋಗ(ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು–2013ರಡಿಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ **"ಹರಪನಹಳ್ಳಿ ತಾಲ್ಲೂಕಿಗೆ"** ಸೇರಲು ಇಚ್ಛಿಸುವ / ಇಚ್ಛಿಸದಿಲ್ಲದಿರುವ ಕುರಿತು ನೌಕರರಿಂದ ಅರ್ಜಿಯನ್ನು ಅಹ್ವಾನಿಸುವ ಬಗ್ಗೆ.

**ಉಲ್ಲೇಖ:–**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ 2012 ದಿನಾಂಕ:06–11–2013.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿ:29–01–2014.
3. ಈ ಕಛೇರಿಯ ಅಧಿಸೂಚನೆ ದಿನಾಂಕ:25–09–2014
4. ಈ ಕಛೇರಿಯ ಅಧಿಸೂಚನೆ ದಿನಾಂಕ:03–12–2014.
5. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ78–ಹೈಕಕೋ/2014, ದಿನಾಂಕ:22–05–2015.
6. ಈ ಕಛೇರಿ ಅಧಿಸೂಚನೆ ದಿನಾಂಕ: 04–09–2015.
7. ಸರ್ಕಾರದ ಅಧಿಸೂಚನೆ ಸಂಖ್ಯೆ: 43 ಹೆಚ್‌ಕೆಸಿ2013 ದಿನಾಂಕ:20–10–2014.
8. ಈ ಕಛೇರಿಯ ಸುತ್ತೋಲೆ ದಿನಾಂಕ: 05–11–2015.
9. ಸರ್ಕಾರದ ಆದೇಶ ಸಂಖ್ಯೆ :ಕಂಇ 139 ಭೂದಾಮ 2013 ದಿನಾಂಕ 21–3–2018.

***********

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ–2013ರ ಅಧಿಸೂಚನೆಯ ಕಂಡಿಕೆ 2(ಐ) ಮತ್ತು ಕಂಡಿಕೆ–13ರ ಅನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತರ ನೇಮಕಾತಿ ಪ್ರಾಧಿಕಾರದ ವ್ಯಾಪ್ತಿಯ ರಾಜ್ಯಮಟ್ಟದ ಕಛೇರಿಗಳಲ್ಲಿನ ಗ್ರೂಪ್ ಬಿ, ಸಿ ಮತ್ತು ಡಿ ಹುದ್ದೆಗಳಲ್ಲಿ ವೃಂದವಾರು ಹೈದ್ರಾಬಾದ್–ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಶೇಕಡ 8ರಷ್ಟು ಹುದ್ದೆಗಳನ್ನು ರಾಜ್ಯ ಮಟ್ಟದ ವೃಂದಕ್ಕೆ ಮೀಸಲಿರಿಸಿ ಉಲ್ಲೇಖ(3)ರಲ್ಲಿ ಈ ಕಛೇರಿಯಿಂದ ಅಧಿಸೂಚನೆ ಹೊರಡಿಸಲಾಗಿತ್ತು.

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು–2013 ಅಧ್ಯಾಯ–4ರ ನಿಯಮ–6ರಂತೆ ಸ್ಥಳೀಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಛಿಸುವ ನೌಕರರು ಅನುಬಂಧ ಸಿ ನಲ್ಲಿ ನಿರ್ದಿಷ್ಠ ಪಡಿಸಿದ ನಮೂನೆಯಲ್ಲಿ ಉಲ್ಲೇಖ(4)ರ ಸುತ್ತೋಲೆಯಂತೆ ಕ್ರಮವಹಿಸಲಾಗಿದೆ.

ಪ್ರಸ್ತುತ ಉಲ್ಲೇಖ–(5)ರ ಸರ್ಕಾರದ ಸುತ್ತೋಲೆಯಲ್ಲಿ ನೀಡಿರುವ ಸ್ಪಷ್ಟೀಕರಣದಂತೆ ರಾಜ್ಯ ಮಟ್ಟದ ಕಚೇರಿ ಎಂದರೆ ರಾಜ್ಯಕ್ಕೆ ಸಮಗ್ರವಾಗಿ ಸೇವೆ ಸಲ್ಲಿಸುತ್ತಿರುವ ಅಥವಾ ರಾಜ್ಯದ ಸಮಗ್ರ ವಿಸ್ತಾರವಾದ ಅಧಿಕಾರ ವ್ಯಾಪ್ತಿಯ ಅಥವಾ ರಾಜ್ಯದ ರಾಜಧಾನಿ ಪ್ರದೇಶಕ್ಕೆ ಸೇವೆ ಸಲ್ಲಿಸುತ್ತಿರುವ ಕಚೇರಿ ಅಂದರೆ 'ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ'ಯ ವ್ಯಾಪ್ತಿಯಲ್ಲಿ ಬರುವಂತಹ ಕಚೇರಿಗಳಲ್ಲಿ ಶೇ **8ರಷ್ಟು** ಮೀಸಲು ನೀಡುವಂತೆ

ಆದೇಶಿಸಲಾಗಿರುವ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಎಲ್ಲಾ ಕಚೇರಿಗಳಲ್ಲಿ ಲಭ್ಯವಿರುವ ಹುದ್ದೆಗಳಲ್ಲಿ ಶೇ.8 ರಷ್ಟು ಹುದ್ದೆಗಳನ್ನು ರಾಜ್ಯ ಮಟ್ಟದ ಸ್ಥಳೀಯ ವೃಂದಕ್ಕೆ ಸೇರಿಸಿ ಉಲ್ಲೇಖ (6) ರಲ್ಲಿ ಈ ಕಛೇರಿಯಿಂದ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಪ್ರಸ್ತುತ ದಾವಣಗೆರೆ ಜಿಲ್ಲೆಯಲ್ಲಿರುವ ಹರಪನಹಳ್ಳಿ ತಾಲ್ಲೂಕನ್ನು, ದಾವಣಗೆರೆ ಜಿಲ್ಲೆಯಿಂದ ತೆಗೆದು ಈ ಹಿಂದೆ ಇದ್ದಂತೆ ಬಳ್ಳಾರಿ ಜಿಲ್ಲೆಯ ವ್ಯಾಪ್ತಿಗೆ ತರಲು ಸರ್ಕಾರವು ಉಲ್ಲೇಖ(8)ರಲ್ಲಿ ಆದೇಶಿಸಿದೆ. ಈ ಹಿನ್ನೆಲೆಯಲ್ಲಿ ಸದರಿ ತಾಲ್ಲೂಕಿನ ವ್ಯಾಪ್ತಿಯಲ್ಲಿನ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಮೀಸಲಾತಿಗೆ ಒಳಪಡುವ ಗ್ರೂಪ್ **ಬಿ, ಸಿ** ಮತ್ತು **ಡಿ** ಹುದ್ದೆಗಳ ವೃಂದದ ಹೈದ್ರಾಬಾದ್-ಕರ್ನಾಟಕ ಪ್ರದೇಶದ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳು ಆ ವೃಂದಕ್ಕೆ ಲಭ್ಯವಿರುವ ಶೇಕಡಾ-8ರಷ್ಟು ಹುದ್ದೆಗಳಿಗೆ ತಮ್ಮ ಅಭಿಮತವನ್ನು ನೀಡಬಹುದಾಗಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳಿಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು-2013ರ ಅಧ್ಯಾಯ-4ರ ನಿಯಮ-6 ರಂತೆ ಹೈದ್ರಾಬಾದ್-ಕರ್ನಾಟಕ ವೃಂದವನ್ನು ಸೇರಲು ಇಚ್ಚಿಸುವ ಹರಪನಹಳ್ಳಿ ತಾಲ್ಲೂಕಿಗೆ ಒಳಪಡುವ ಗ್ರೂಪ್ **ಬಿ,** ಸಿ ಮತ್ತು **ಡಿ** ನೌಕರರು **ಅನುಬಂಧ-ಸಿ** ಯಲ್ಲಿ ನಿರ್ದಿಷ್ಟಪಡಿಸಿದ ನಮೂನೆಯಲ್ಲಿ 30 ದಿನಗಳ ಒಳಗಾಗಿ ಅಯ್ಕೆಯನ್ನು ಚಲಾಯಿಸಲು ಅರ್ಜಿಯನ್ನು ಅಹ್ವಾನಿಸಲಾಗಿದೆ. ಅರ್ಹ ನೌಕರರು ಈ ಸುತ್ತೋಲೆಯ ದಿನಾಂಕದಿಂದ 30 ದಿನಗಳಲ್ಲಿ ತಮ್ಮ ಆಯ್ಕೆಯನ್ನು ಚಲಾಯಿಸಲು ತಿಳಿಸಿದೆ. ನೌಕರರು ನಿಗಧಿತ ಅವಧಿಯಲ್ಲಿ ಆಯ್ಕೆಯನ್ನು ಚಲಾಯಿಸದಿರುವ ಸಂದರ್ಭದಲ್ಲಿ ಸ್ಥಳೀಯ ವೃಂದವನ್ನು ಸೇರಲು ಇಚ್ಚೆ ಹೊಂದಿಲ್ಲವೆಂದು ಭಾವಿಸಲಾಗುವುದು.

**[ಡಾ॥ ಪಿ ಸಿ ಜಾಫರ್]**
**ಆಯುಕ್ತರು**

**ಇವರಿಗೆ:-**

1. ಹರಪನಹಳ್ಳಿ ತಾಲ್ಲೂಕಿನ ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ ಬಿ, ಸಿ ಮತ್ತು ಡಿ ಸ್ಥಳಿಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಚಿಸುವ ನೌಕರರಿಗೆ ಉಪನಿರ್ದೇಶಕರು ದಾವಣಗೆರೆ ಮತ್ತು ಬಳ್ಳಾರಿಯವರ ಮೂಲಕ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ದಾವಣಗೆರೆ/ಬಳ್ಳಾರಿ ಜಿಲ್ಲಾ ಉಪ ನಿರ್ದೇಶಕರು (ಆಡಳಿತ).
3. ಸಾರ್ವಜನಿಕ ಶಿಕ್ಷಣ ಹರಪನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳು.

**ಪ್ರತಿಗಳು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಹೈದರಾಬಾದ್ -ಕರ್ನಾಟಕ ವಿಶೇಷ ಕೋಶ, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ.
6. ರಾಜ್ಯ ಯೋಜನಾ ನಿರ್ದೇಶಕರು, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು.
7. ನಿರ್ದೇಶಕರು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)ರವರಿಗೆ
8. ದಾವಣಗೆರೆ ಹಾಗೂ ಬಳ್ಳಾರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಹರಪನಹಳ್ಳಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.
10. ಹಿರಿಯ ಸಹಾಯಕ ನಿರ್ದೇಶಕರು, ಇ ಆಡಳಿತ ಘಟಕ, (ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
11. ಕಛೇರಿ ಪ್ರತಿ. c:\users\j\desktop\harapanahalli 371j case.docx